ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

DTE-ADMI0ACM2/74/2022

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು - 560 001.
ದಿನಾಂಕ: 25-08-2022

-:: ಸುತ್ತೋಲೆ ::-

ವಿಷಯ: 2022-23ನೇ ಶೈಕ್ಷಣಿಕ ಸಾಲಿಗೆ ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು ಈ ಸಂಸ್ಥೆಯಲ್ಲಿನ ಅಂತರಾಷ್ಟ್ರೀಯ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ನಡೆಸಲಾಗುವ (International Twinning Program) (1) Tourism & Hospitality (2) Cyber Security ಕೋರ್ಸುಗಳಿಗೆ ಅರ್ಜಿ ಸಲ್ಲಿಸಲು ಪ್ರವೇಶ ಅವಧಿ ವಿಸ್ತರಿಸುವ ಬಗ್ಗೆ.

ಉಲ್ಲೇಖ:- ಈ ಕಛೇರಿ ಸಮಸಂಖ್ಯೆ ಪ್ರವೇಶಾಧಿಸೂಚನೆ ದಿ:16-08-2022.

-*********-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪ್ರವೇಶಾಧಿಸೂಚನೆ ಅನ್ವಯ ಬೆಂಗಳೂರಿನ ಎಸ್.ಜೆ.ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಅಂತರಾಷ್ಟ್ರೀಯ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ನಡೆಸಲಾಗುವ (International Twinning Program) (1) Tourism & Hospitality (2) Cyber Security ಕೋರ್ಸುಗಳಿಗೆ ಅರ್ಜಿ ಸಲ್ಲಿಸಲು ದಿ:25-08-2022ರಂದು ಅಂತಿಮ ದಿನಾಂಕವನ್ನು ಹಾಗೂ ಪ್ರವೇಶಾತಿ ಪ್ರಕ್ರಿಯೆಯ ತಾತ್ಕಾಲಿಕ ವೇಳಾಪಟ್ಟಿಯನ್ನು ನಿಗಧಿಗೊಳಿಸಲಾಗಿತ್ತು. ವಿದ್ಯಾರ್ಥಿಗಳ ಶೈಕ್ಷಣಿಕ ಹಿತ್ಯದೃಷ್ಟಿಯಿಂದ ಅರ್ಜಿ ಸಲ್ಲಿಸಲು ದಿನಾಂಕ:10-09-2022ರವರೆಗೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ. ಅಭ್ಯರ್ಥಿಗಳ ಪ್ರವೇಶಕ್ಕೆ ಸಂಬಂಧಿಸಿದ ಪರಿಷ್ಕೃತ ವೇಳಾಪಟ್ಟಿ ಈ ಕೆಳಕಂಡಂತೆ ಇರುತ್ತದೆ.

| ಕ್ರ.ಸಂ. | ಪ್ರವೇಶ ಪ್ರಕ್ರಿಯೆಗೆ ಸಂಬಂಧಿಸಿದ ವಿವರ | ದಿನಾಂಕ |
|---|---|---|
| 01 | ಇಲಾಖೆಯ ಅಧೀಕೃತ ವೆಬ್‌ಸೈಟ್‌ನಿಂದ ಅರ್ಜಿ & ಆದ್ಯತಾ ಪಟ್ಟಿಯನ್ನು ಡೌನ್‌ಲೋಡ್ ಮಾಡಿಕೊಂಡು, ಭರ್ತಿ ಮಾಡಿದ ಅರ್ಜಿ, ಆದ್ಯತಾ ಪಟ್ಟಿಯನ್ನು ಆನ್‌ಲೈನ್ ಮುಖಾಂತರ ಸಮೀಪ ಇರುವ 89 ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಿಂದ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: | 10-09-2022 |
| 03 | Online ಪ್ರವೇಶ ಪರೀಕ್ಷೆ – 2022<br>(ಪರೀಕ್ಷೆ ನಡೆಯುವ ಸ್ಥಳ: ರಾಜ್ಯದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪರೀಕ್ಷಾ ಕೇಂದ್ರಗಳಲ್ಲಿ) | 14-09-2022<br>ಸಮಯ ಬೆಳಿಗ್ಗೆ 10.00 ರಿಂದ 12.00 ರವರೆಗೆ |
| 04 | ಪ್ರವೇಶ ಪರೀಕ್ಷೆಯ ಫಲಿತಾಂಶ (ವೆಬ್‌ಸೈಟ್/SMS ಮೂಲಕ) | 17-09-2022 |
| 05 | ಆಯ್ಕೆ ಪಟ್ಟಿ ಪ್ರಕಟಣೆ (ವೆಬ್‌ಸೈಟ್/SMS ಮೂಲಕ) | 19-09-2022 |
| 06 | ಆಯ್ಕೆಯಾದ ಅಭ್ಯರ್ಥಿಗಳು ಎಸ್.ಜೆ ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು ಇಲ್ಲಿ ಪ್ರವೇಶ ಪಡೆಯಲು ಕೊನೆಯ ದಿನಾಂಕ: | 23-09-2022 |

Scanned with CamScanner

ಪ್ರಾಂಶುಪಾಲರು ಕೂಡಲೇ ಈ ಬಗ್ಗೆ ಕ್ರಮ ತೆಗೆದುಕೊಂಡು ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು ಹಾಗೂ ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. ಮೇಲ್ಕಂಡ ಬದಲಾವಣೆ ಹೊರತುಪಡಿಸಿ ಉಳಿದಂತೆ ಉಲ್ಲೇಖಿತ ಪ್ರವೇಶಾಧಿಸೂಚನೆಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

*ಪ್ರವೇಶ ಪರೀಕ್ಷೆ ಪಠ್ಯಕ್ರಮ, ಆನ್‌ಲೈನ್ ಪರೀಕ್ಷೆಗೆ ಸಂಬಂಧಿಸಿದ ಮಾಹಿತಿಗಾಗಿ ವೆಬ್‌ಸೈಟ್* dtetech.karnataka.gov.in/kartechnical *ನ್ನು ನೋಡುವುದು ಅಥವಾ ಸಮೀಪ ಇರುವ ಸರ್ಕಾರಿ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರನ್ನು ಸಂಪರ್ಕಿಸುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.*

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ಗೆ,

ರಾಜ್ಯದ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ - ಮಾಹಿತಿಗಾಗಿ & ಮುಂದಿನ ಅಗತ್ಯ ಕ್ರಮಕ್ಕಾಗಿ ಹಾಗೂ ಸಂಸ್ಥೆಯ ಸೂಚನಾ ಫಲಕದಲ್ಲಿ ಅಭ್ಯರ್ಥಿಗಳ ಮತ್ತು ಪೋಷಕರ ಗಮನಕ್ಕೆ ಪ್ರಕಟಿಸುವುದು.

ಪ್ರತಿ ಮಾಹಿತಿಗಾಗಿ:-

1) ಮಾನ್ಯ ಆಯುಕ್ತರ ಆಪ್ತಶಾಖೆಗೆ.
2) ಮಾನ್ಯ ನಿರ್ದೇಶಕರ ಆಪ್ತಶಾಖೆಗೆ.
3) ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
4) ಜಂಟಿ ನಿರ್ದೇಶಕರು(ಸಿಡಿಸಿ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
5) ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು
6) ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
7) ಪ್ರಾಂಶುಪಾಲರು, ಸರ್ಕಾರಿ ಎಸ್.ಜೆ. ಪಾಲಿಟೆಕ್ನಿಕ್, ಬೆಂಗಳೂರು - ಮಾಹಿತಿಗಾಗಿ & ಮುಂದಿನ ಅಗತ್ಯ ಕ್ರಮಕ್ಕಾಗಿ
6) ಡಿವಿಪಿ(1) ಮತ್ತು ಡಿವಿಪಿ(2) ವಿಭಾಗಕ್ಕೆ.
7) ಇ-ಆಡಳಿತ ವಿಭಾಗಕ್ಕೆ - ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
8) ಕಡತಕ್ಕೆ.

Scanned with CamScanner